ಜಿಲ್ಲಾ ಪರಿಷತ್ತುಗಳ ಅಧಿಕಾರ

೨೨೫. ಶ್ರೀ ಜಿ. ಎಸ್. ಆಚಾರ್ (ಬೈಂದೂರ್) –ಮಾನ್ಯ ಗ್ರಾಮೀಣ ಅಭಿವೃದ್ಧಿ ಪಂಚಾಯತ್ ರಾಜ್ ಮತ್ತು ವಕ್ಫ್ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಗ್ರಾಮೀಣ ಜನತೆಗೆ ಅಧಿಕಾರದ ಹಸ್ತಾಂತರ ಮಾಡಲು ರೂಪಿತವಾದ ಜಿಲ್ಲಾ ಪರಿಷತ್‌ಗಳಲ್ಲಿ ಅವುಗಳ ಅಧೀನ ಇಲಾಖೆಗಳಿಗೆ ಬೇಕಾದ ಸಿಬ್ಬಂದಿ ನೇಮಕ ಮಾಡದೇ ಹಾಗೂ ಅಧಿಕಾರಿಗಳ ಕುರಿತು ಸ್ಪಷ್ಟ ಮಾರ್ಗದರ್ಶನ ನೀಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಇದರಿಂದಾಗಿ ಆಡಳಿತ ನಿರ್ವಹಣೆಗೆ ತೊಂದರೆ ಆಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಇ) ಇದರ ನಿವಾರಣೆಗಾಗಿ ಯಾವ ಕ್ರಮ ಕೈಗೊಳ್ಳಲಾಗುವುದು ಮತ್ತು ಯಾವಾಗ ?

ಶ್ರೀ ಅಬ್ದುಲ್ ನಜೀರ್ ಸಾಬ್(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು).–

ಅ) ಜಿಲ್ಲಾ ಪರಿಷತ್ತು ಅಸ್ತಿತ್ವಕ್ಕೆ ಬಂದ ನಂತರ ಅವುಗಳ ಅಧೀನ ಇಲಾಖೆಗಳಿಗೆ ಬೇಕಾದ ಸಿಬ್ಬಂದಿಗಳ ನೇಮಕಾತಿಗಳು ಸಂಬಂಧಪಟ್ಟ ಇಲಾಖೆಗಳಿಂದಲೂ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಕಾಲಕಾಲಕ್ಕೆ ಮಾಡಲಾಗಿರುತ್ತಿದೆ ಮತ್ತು ಈ ಅಧಿಕಾರಿಗಳ ಅಧಿಕಾರ ಕುರಿತು ಸರ್ಕಾರದಿಂದ ಸ್ಪಷ್ಟ ಮಾರ್ಗದರ್ಶನ ನೀಡಲಾಗಿದೆ.

ಆ) ಇಲ್ಲ

ಇ) ಉದ್ಭವಿಸುವುದಿಲ್ಲ

ಮರವಂತೆಯಲ್ಲಿ ಪ್ರವಾಸಿಧಾಮ ರಚಿಸುವ ಕುರಿತು

೨೩೨. ಶ್ರೀ ಜಿ.ಎಸ್. ಆಚಾರ್(ಬೈಂದೂರು).–ಮಾನ್ಯ ವಾರ್ತಾ, ಪ್ರವಾಸೋದ್ಯಮ, ಸಂಸ್ಕೃತಿ ಮತ್ತು ಬೆಂಗಳೂರು ಅಭಿವೃದ್ಧಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದಕ್ಷಿಣ ಕನ್ನಡ ಜಿಲ್ಲೆಯ ನಿಸರ್ಗ ಸುಂದರತಾಣ ಮರವಂತೆಯನ್ನು ಪ್ರವಾಸಿಧಾಮವನ್ನಾಗಿ ಮಾಡಲು ಸರ್ಕಾರದವರು ಕೈಗೊಂಡ ಕ್ರಮಗಳಾವುವು ?

ಆ) ಸದರಿ ಯೋಜನೆ ಕಾರ್ಯ ರೂಪಕ್ಕೆ ಬರುವುದು ಯಾವಾಗ ?

ಶ್ರೀ ಎಂ.ಪಿ. ಪ್ರಕಾಶ್(ವಾರ್ತಾ,ಪ್ರವಾಸೋದ್ಯಮ, ಸಂಸ್ಕೃತಿ ಮತ್ತು ಬೆಂಗಳೂರು ಅಭಿವೃದ್ಧಿ ಮಂತ್ರಿಗಳು).—

ಅ) ಮರವಂತೆಯನ್ನು ಪ್ರವಾಸಿಧಾಮವನ್ನಾಗಿ ಅಭಿವೃದ್ಧಿ ಪಡಿಸಲು ಸೂಕ್ತ ಸ್ಥಳವನ್ನು ಆರಿಸಲಾಗಿದ್ದು ಕ್ರಮ ಕೈಗೊಳ್ಳಲಾಗುತ್ತಿದೆ

ಆ) ಸೂಕ್ತ ಸ್ಥಳ ದೊರಕಿದ ಕೂಡಲೇ ಕ್ರಮ ತೆಗೆದುಕೊಳ್ಳಲಾಗುವುದು.

ಎನ್. ಆರ್. ಇ. ಪಿ. ಯೋಜನೆ ಕಾರ್ಯಗತವಾಗುತ್ತಿರುವ ವಿಚಾರ

೨೩೩. ಶ್ರೀ ಜಿ. ಎಸ್. ಆಚಾರ್ (ಬೈಂದೂರು).– ಮಾನ್ಯ ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಮತ್ತು ವಕ್ಫ್ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿ ಎನ್‌ಆರ್‌ಇಪಿ ಯೋಜನೆ ಯಾವ ಯಾವ ಜಿಲ್ಲೆಗಳಲ್ಲಿ ಜಿಲ್ಲಾ ಪರಿಷತ್ತುಗಳ ಮೂಲಕ ಕಾರ್ಯಗತವಾಗುತ್ತಿದೆ.

ಆ) ಯಾವ ಯಾವ ಜಿಲ್ಲೆಗಳಲ್ಲಿ ತಾಲ್ಲೂಕು ಪಂಚಾಯಿತಿ ಸಮಿತಿ ಮೂಲಕ ಕಾರ್ಯಗತವಾಗುತ್ತಿದೆ.

ಇ) ಕ್ಷೇತ್ರಾಭಿವೃದ್ಧಿ ಅಧಿಕಾರಿಗಳ ಮೂಲಕ ಕಾರ್ಯಗತವಾಗುತ್ತಿರುವ ಯೋಜನೆಗಳಾವುವು?